All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

27.02.2025 6.40 P.M.

*****************

ಮುಖ್ಯಾಂಶಗಳು

- ಕ್ಷೇತ್ರ ಮರು ವಿಗಂಡಣೆ ವಿಚಾರ - ದಕ್ಷಿಣದ ರಾಜ್ಯಳಿಗೆ ಅನ್ಯಾಯವಾಗಲು ಬಿಡಲ್ಲ - ಮುಖ್ಯಮಂತ್ರಿ ಸಿದ್ದರಾಮಯ್ಯ
- ವಿಧಾನಸೌಧದಲ್ಲಿ ಇಂದಿನಿಂದ ಪುಸ್ತಕ ಮೇಳ -ಮುಖ್ಯಮಂತ್ರಿ ಚಾಲನೆ
- ರಾಜ್ಯದಲ್ಲಿ ದಾದಿಯರು, ಅರೆವೈದ್ಯರಿಂದ ಅನಿರ್ದಿಷ್ಟಾವಧಿ ಮುಷ್ಕರ; ಗ್ರಾಮೀಣ ಪ್ರದೇಶದಲ್ಲಿ ಆರೋಗ್ಯ ಸೇವೆ ವ್ಯತ್ಯಯ
- ಆರೋಗ್ಯದ ಮೇಲೆ ಗಂಭೀರ ಪರಿಣಾಮ ಹಿನ್ನೆಲೆ - ಹೊಟೇಲ್ ಗಳಲ್ಲಿ ಇಡ್ಲಿ ತಯಾರಿಕೆ ವೇಳೆ ಪ್ಲಾಸ್ಟಿಕ್ ಬಳಕೆ ನಿಷೇಧ
- ಡಿಜಿಟಲ್ ವಿಷಯ ರಚನೆಯಲ್ಲಿ ಬೆಂಗಳೂರನ್ನು ಜಾಗತಿಕ ರಾಜಧಾನಿಯನ್ನಾಗಿ ಮಾಡುವ ಗುರಿ - ಸಚಿವ ಪ್ರಿಯಾಂಕ್ ಖರ್ಗೆ

*****************

ಕ್ಷೇತ್ರ ಮರುವಿಂಗಡಣೆಗೆ ಸಂಬಂಧಿಸಿದಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿಕೆ ನಂಬಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಧ್ಯಮ ಪ್ರಕಟಣೆ ಮೂಲಕ ತಿಳಿಸಿದ್ದಾರೆ. ಕೇಂದ್ರದ ಅನ್ಯಾಯದ ವಿರುದ್ಧ ಸಮಗ್ರ ರೂಪದ ಹೋರಾಟವನ್ನು ನಡೆಸಲು ನೆರೆಯ ದಕ್ಷಿಣದ ರಾಜ್ಯಗಳ ಜೊತೆಯಲ್ಲಿಯೂ ಮಾತುಕತೆ ನಡೆಸಲಾಗುತ್ತಿದೆ ಎಂದು ಹೇಳಿದ್ದಾರೆ.

ಇದು ದಕ್ಷಿಣದ ರಾಜ್ಯಗಳಲ್ಲಿ ಗೊಂದಲ ಹುಟ್ಟಿಸುವ ದುರುದ್ದೇಶದಿಂದ ಕೂಡಿದೆ ಎಂದು ಆರೋಪಿಸಿದ್ದಾರೆ. ಜನಸಂಖ್ಯೆಯ ಅನುಪಾತದಲ್ಲಿ ಕ್ಷೇತ್ರ ಮರುವಿಂಗಡಣೆ ನಡೆದರೆ ದಕ್ಷಿಣದ ರಾಜ್ಯಗಳಿಗೆ ಅನ್ಯಾಯ ಕಟ್ಟಿಟ್ಟ ಬುತ್ತಿ ಎಂದು ತಿಳಿಸಿದ್ದಾರೆ.

ಕಳೆದ ೫೦ ವರ್ಷಗಳಲ್ಲಿ ದಕ್ಷಿಣದ ರಾಜ್ಯಗಳು ಪರಿಣಾಮಕಾರಿ ಕ್ರಮಗಳ ಮೂಲಕ ಜನಸಂಖ್ಯೆಯನ್ನು ನಿಯಂತ್ರಿಸಿರುವುದು ಮಾತ್ರವಲ್ಲ, ಅಭಿವೃದ್ಧಿಯ ಪಥದಲ್ಲಿ ಮುನ್ನಡೆಯುತ್ತಿವೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಕ್ಷೇತ್ರ ಮರುವಿಂಗಡಣೆಯನ್ನು ಇತ್ತೀಚಿನ ಜನಗಣತಿಯಿಂದ ಪಡೆದ ಜನಸಂಖ್ಯೆಯ ಅನುಪಾತದ ಮೇಲೆ ನಡೆಸಿದರೆ ಜನಸಂಖ್ಯೆಯ ನಿಯಂತ್ರಣ ಮಾಡಿರುವ ಕರ್ನಾಟಕವೂ ಸೇರಿದಂತೆ ದಕ್ಷಿಣದ ರಾಜ್ಯಗಳ ಲೋಕಸಭಾ ಕ್ಷೇತ್ರಗಳ ಸಂಖ್ಯೆ ಕಡಿಮೆಯಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

*****************

ವಿಧಾನಸೌಧ ಆವರಣದಲ್ಲಿ ಇದೇ ಮೊಟ್ಟ ಮೊದಲ ಬಾರಿಗೆ ಪುಸ್ತಕ ಮೇಳ ಆಯೋಜಿಸಲಾಗಿದ್ದು, ಇಂದಿನಿಂದ ಮಾರ್ಚ್ ೨ ರವರೆಗೆ ನಾಲ್ಕು ದಿನಗಳ ಕಾಲ ನಡೆಯಲಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಪುಸ್ತಕ ಮೇಳಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಚಂದ್ರಶೇಖರ ಕಂಬಾರ, ಗೋವಾದ ಹಿರಿಯ ಸಾಹಿತಿ ದಾಮೋದರ್ ಮೋಜೊ ಅವರನ್ನು ಸನ್ಮಾನಿಸಲಾಯಿತು.

ಇದೇ ವೇಳೆ, ಬರಹಗಾರ ಮನುದೇಂದ್ರ, ಬೊಳುವಾರು ಮಹಮ್ಮದ್ ಕುಂಞ್ಞಿ ಅವರನ್ನು ಗೌರವಿಸಲಾಯಿತು.

ಮಕ್ಕಳ ಸಾಹಿತ್ಯ, ಸಿನಿಮಾ, ಸಂವಿಧಾನ ಮತ್ತು ಕನ್ನಡ ಸಾಹಿತ್ಯದಂತಹ ವಿಷಯಗಳ ಕುರಿತು ಬರಹಗಾರರು ಮತ್ತು ತಜ್ಞರೊಂದಿಗೆ ಪ್ರತಿದಿನ ಸಂವಾದ ನಡೆಯಲಿದೆ. ಮೇಳಕ್ಕೆ ಸಾರ್ವಜನಿಕರಿಗೆ ಮುಕ್ತ ಅವಕಾಶ ನೀಡಲಾಗಿದೆ.

*****************

ರಾಜ್ಯದಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ೬ ಸಾವಿರಕ್ಕೂ ಹೆಚ್ಚು ದಾದಿಯರು ಮತ್ತು ಅರೆವೈದ್ಯರು ಅನಿರ್ದಿಷ್ಟವಾಧಿ ಮುಷ್ಕರ ನಡೆಸುತ್ತಿದ್ದು ಇಂದು ಗ್ರಾಮೀಣ ಪ್ರದೇಶದಲ್ಲಿ ಆರೋಗ್ಯ ಸೇವೆಗಳು ಅಸ್ತವ್ಯಸ್ತಗೊಂಡಿವೆ ಎಂದು ಐಎಎನಸ್ ಸುದ್ಧಿ ಸಂಸ್ಥೆ ವರದಿ ಮಾಡಿದೆ.

ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಕರ್ನಾಟಕ ರಾಜ್ಯ ಗುತ್ತಿಗೆ ಪ್ಯಾರಾಮೆಡಿಕಲ್ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ ನಡೆಯುತ್ತಿರುವ ಮುಷ್ಕರ ಇಂದು ಎರಡನೇ ದಿನಕ್ಕೆ ಕಾಲಿಟ್ಟಿದೆ. ಎಲ್ಲಾ ಜಿಲ್ಲೆಗಳಿಂದ ದಾದಿಯರು ಮತ್ತು ಅರೆವೈದ್ಯಕೀಯ ಸಿಬ್ಬಂದಿ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದಾರೆ.

"ಸಮಾನ ಕೆಲಸಕ್ಕೆ ಸಮಾನ ವೇತನ", 'ನಮಗೆ ನ್ಯಾಯ ಬೇಕು" ಎಂಬ ಘೋಷಣೆಗಳ ಫಲಕಗಳನ್ನು ಹಿಡಿದ ಪ್ರತಿಭಟನಾಕಾರರು ಸರ್ಕಾರ ಕೂಡಲೇ ಮಧ್ಯಪ್ರವೇಶಿಸಬೇಕು ಎಂದು ಒತ್ತಾಯಿಸಿದ್ದಾರೆ.

೧೫ ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದರೂ ತಿಂಗಳಿಗೆ ಕೇವಲ ೧೪ ಸಾವಿರ ರೂಪಾಯಿ ವೇತನ ನೀಡಲಾಗುತ್ತಿದೆ ಎಂದು ದೂರಿದ್ದಾರೆ.

*****************

ಆಹಾರ ತಯಾರಿಕೆಯಲ್ಲಿ ಅದರಲ್ಲೂ ಹೆಚ್ಚಾಗಿ ಇಡ್ಲಿ ತಯಾರಿಕೆಯಲ್ಲಿ ಪ್ಲಾಸ್ಟಿಕ್ ಬಳಕೆ ಹೆಚ್ಚಾಗಿದ್ದು, ಇದು ಸಾರ್ವಜನಿಕ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರಲಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಸಾಮಾಜಿಕ ಜಾಲ ತಾಣದಲ್ಲಿ ಪೋಸ್ಟ್ ಮಾಡಿರುವ ಅವರು ಹೋಟೆಲ್, ಉಪಹಾರ ಕೇಂದ್ರಗಳಲ್ಲಿ ಇಡ್ಲಿ ತಯಾರಿಕೆಯಲ್ಲಿ ಪ್ಲಾಸ್ಟಿಕ್ ಬಳಕೆ ನಿಷೇಧಿಸಲಾಗಿದೆ. ಇನ್ನೆರಡು ದಿನಗಳಲ್ಲಿ ಈ ಕುರಿತು ಅಧಿಕೃತವಾಗಿ ಸುತ್ತೋಲೆ ಹೊರಡಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಹೋಟೆಲ್, ರಸ್ತೆಬದಿ ತಿಂಡಿ ಅಂಗಡಿಗಳಲ್ಲಿ ಪ್ಲಾಸ್ಟಿಕ್ ಕವರ್ ಬಳಸಬಾರದು ಎಂದು ಸೂಚನೆ ನೀಡಿದ್ದಾರೆ.

ಸುಮಾರು ೨೫೧ ಹೋಟೆಲ್, ಅಂಗಡಿಗಳಿಂದ ಆಹಾರದ ಮಾದರಿ ಪಡೆಯಲಾಗಿತ್ತು. ಅವುಗಳ ಪೈಕಿ ೫೧ ಕಡೆ ಸಂಗ್ರಹಿಸಿದ್ದ ಮಾದರಿ ಅಸುರಕ್ಷಿತ ಎಂಬುದು ಪ್ರಯೋಗಾಲಯ ಪರೀಕ್ಷೆಯಲ್ಲಿ ದೃಢಪಟ್ಟಿದೆ. ಅವುಗಳಲ್ಲಿ ಕಾರ್ಸಿನೋಜೆನಿಕ್ ಅಂಶ ಪತ್ತೆಯಾಗಿದೆ ಎಂದು ಮಾಹಿತಿ ನೀಡಿದ್ದಾರೆ.

*****************

ಭಾರತದ ಎವಿಜಿಸಿ ಉತ್ಪಾದನಾ ಕ್ಷೇತ್ರದಲ್ಲಿ ರಾಜ್ಯದ ಸುಮಾರು ೩೦೦ ಕಂಪನಿಗಳಿದ್ದು, ಸುಮಾರು ಶೇಕಡ ೨೦ರಷ್ಟು ಕೊಡುಗೆ ನೀಡುತ್ತಿವೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ನಡೆಯುತ್ತಿರುವ ಗೆಫೆಕ್ಸ್ ಶೃಂಗಸಭೆಗೆ ಚಾಲನೆ ನೀಡಿ, ಮಾತನಾಡಿದ ಅವರು, ಡಿಜಿಟಲ್ ವಿಷಯ ರಚನೆಯಲ್ಲಿ ಬೆಂಗಳೂರನ್ನು ಜಾಗತಿಕ ರಾಜಧಾನಿಯನ್ನಾಗಿ ಮಾಡುವುದು ನಮ್ಮ ಗುರಿಯಾಗಿದೆ ಎಂದು ಹೇಳಿದ್ದಾರೆ.

ಸಂಶೋಧನೆ ಮತ್ತು ಅಭಿವೃದ್ಧಿಯು ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ನಾವೀನ್ಯತೆಯನ್ನು ಪ್ರೋತ್ಸಾಹಿಸುತ್ತದೆ ಎಂದು ತಿಳಿಸಿದ ಅವರು ಎವಿಜಿಸಿ ಪಠ್ಯಕ್ರಮ ಸಂಯೋಜಿಸಿ  ಶೈಕ್ಷಣಿಕ ಕಾರ್ಯಕ್ರಮಗಳು ಉದ್ಯಮದ ಅಗತ್ಯತೆಗಳೊಂದಿಗೆ ಹೊಂದಿಕೆಯಾಗುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

೨೦೨೮ ರ ವೇಳೆಗೆ ೩೦,೦೦೦ ಹೊಸ ಉದ್ಯೋಗ ಗಳನ್ನು ಸೃಷ್ಟಿಸುವ ಗುರಿ ಹೊಂದಲಾಗಿದೆ. ರಾಜ್ಯದ ಂಗಿಉಅ ನೀತಿಯಲ್ಲಿ ಉಲ್ಲೇಖಿಸಿರುವಂತೆ ೨೦೨೯ ರ ವೇಳೆಗೆ ಕಾರ್ಯಾಚರಣೆಯ ದಕ್ಷತೆಗಳಲ್ಲಿ ಶೇಕಡ ೩೦ರಷ್ಟು ಹೆಚ್ಚಳ, ಸೃಜನಶೀಲ ಉತ್ಪಾದನೆಯಲ್ಲಿ ಶೇಕಡ ೨೦ ಮತ್ತು ಡಿಜಿಟಲ್ ಮಾರ್ಕೆಟಿಂಗ್ ನಲ್ಲಿ ಶೇ ೨೫ರಷ್ಟು ವಿಸ್ತರಣೆ ಸಾಧಿಸಲಾಗುವುದು ಎಂದು ತಿಳಿಸಿದ್ದಾರೆ.

ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಕಾರ್ಯದರ್ಶಿ ಸಂಜಯ್ ಜಾಜು, ಮಾತನಾಡಿ, ಮೇ ೧ ರಿಂದ ೪ರವರೆಗೆ ಮುಂಬೈನಲ್ಲಿ ವೇವ್ಸ್ ಶೃಂಗಸಭೆ ಏರ್ಪಡಿಸಲಾಗುತ್ತಿದ್ದು, ಹಿಂದೆಂದೂ ಕಂಡರಿಯದ ರೀತಿಯಲ್ಲಿ ಮಾಧ್ಯಮ ಮತ್ತು ಮನರಂಜನಾ ಕ್ಷೇತ್ರಕ್ಕೆ ಸಂಬಂಧಪಟ್ಟ ತಜ್ಞರು ಭಾಗವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ.

ಭಾರತವನ್ನು ವಿಷಯ ರಚನಾಕಾರರ ಮುಖ್ಯ ತಾಣವಾಗಿ ಹಾಗೂ ಭಾರತದ ಸಾಂಪ್ರದಾಯಿಕ ಕತೆಗಳನ್ನು ಪ್ರಸಾರ ಮಾಡುವ ಜೊತೆಗೆ ಕೇಸರಿ ಅರ್ಥವ್ಯವಸ್ಥೆ ಸೃಷ್ಟಿಸುವ ಪ್ರಧಾನಿ ಕನಸನ್ನು ನನಸು ಮಾಡಲು ಈ ಕ್ಷೇತ್ರದ ಧುರೀಣರು ವೇವ್ಸ್ ಶೃಂಗಸಭೆಯಲ್ಲಿ ಭಾಗಿಯಾಗಲಿದ್ದಾರೆ ಎಂದು ಹೇಳಿದ್ದಾರೆ.

*****************

ಬೆಂಗಳೂರಿನ ಕಾಫಿ ಮಂಡಳಿಯಲ್ಲಿ ಇಂದು ಅಂತರ್ ಮಾಧ್ಯಮ ಪ್ರಚಾರ ಸಮನ್ವಯ ಸಮಿತಿ ಸಭೆ ಪ್ರೆಸ್ ಇನ್‌ಫರ್ಮೇಷನ್ ಬ್ಯೂರೊ-ಪಿಐಬಿ ಅಧ್ಯಕ್ಷತೆಯಲ್ಲಿ ನಡೆಯಿತು.

ಸಭೇಯಲ್ಲಿ ಮಾತನಾಡಿದ ಕಾಫಿ ಮಂಡಳಿಯ ಕಾರ್ಯದರ್ಶಿ ಡಾ. ಕೆ. ಜಿ. ಜಗದೀಶ್, ಭಾರತವು ಕಾಫಿ ಉತ್ಪಾದನೆಯಲ್ಲಿ ಏಳನೇ ಅತಿ ದೊಡ್ಡ ಮತ್ತು ಜಾಗತಿಕವಾಗಿ ಐದನೇ ಅತಿ ದೊಡ್ಡ ರಫ್ತು ಮಾಡುವ ದೇಶವಾಗಿದೆ ಎಂದು ಹೇಳಿದರು.

ಸಭೆಯಲ್ಲಿ ನಿಮ್ಹಾನ್ಸ್, ಆಕಾಶವಾಣಿ, ದೂರದರ್ಶನ ಸೇರಿದಂತೆ ೨೫ಕ್ಕೂ ಹೆಚ್ಚು ಕೇಂದ್ರ ಸರ್ಕಾರದ ಸಂಸ್ಥೆಗಳು ಭಾಗಿಯಾಗಿದ್ದವು.

*****************

ರಾಜ್ಯದಲ್ಲಿ ನೀರಿನ ಸಮಸ್ಯೆ ಇರುವಾಗ ಪಕ್ಕದ ರಾಜ್ಯಕ್ಕೆ ನೀರು ಹರಿಸಿ ರಾಜ್ಯ ಸರ್ಕಾರ ಜನರಿಗೆ ದ್ರೋಹ ಬಗೆದಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳಿಂದ ಸುಮಾರು ಒಂದೂವರೆ ಟಿಎಂಸಿ ನೀರನ್ನು ತೆಲಂಗಾಣಕ್ಕೆ ಕಾಂಗ್ರೆಸ್ ಸರ್ಕಾರ ಹರಿಸಿದೆ. ಅಲ್ಲಿನ ಕಾಂಗ್ರೆಸ್ ಸರ್ಕಾರವನ್ನು ತೃಪ್ತಿಪಡಿಸಲು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕನ್ನಡಿಗರ ಹಿತವನ್ನು ಕಡೆಗಣಿಸಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರಾಷ್ಟ್ರೀಯ ಆರೋಗ್ಯ ಅಭಿಯಾನದ ಸಿಬ್ಬಂದಿಗೆ ಸರಿಯಾಗಿ ವೇತನ ಪಾವತಿಸಿಲ್ಲ. ಬೆಂಗಳೂರಿನ ಆಸ್ಪತ್ರೆಗಳ ವೈದ್ಯರಿಗೆ ವೇತನ ನೀಡಿಲ್ಲ. ವಿಶ್ವವಿದ್ಯಾಲಯಗಳನ್ನು ಮುಚ್ಚಲಾಗಿದೆ. ಹಾಲಿನ ಪ್ರೋತ್ಸಾಹಧನದ ಬಾಕಿ ಉಳಿದಿದೆ. ಇದರ ಜೊತೆಗೆ ತೆರಿಗೆಗಳನ್ನು ಏರಿಸಲಾಗಿದೆ ಎಂದು ಅವರು ದೂರಿದ್ದಾರೆ.

*****************

ಮಾಜಿ ಪ್ರಧಾನಿ ಜವಹಾರ್ ಲಾಲ್ ನೆಹರೂ ಅವರ ಪಂಚವಾರ್ಷಿಕ ಯೋಜನೆಗಳು ಮುಂದುವರಿಯಬೇಕಿತ್ತು ಎಂದು ಯೋಜನಾ ಆಯೋಗದ ಉಪಾಧ್ಯಕ್ಷರಾಗಿ ನೇಮಕಗೊಂಡಿರುವ ಅಳಂದ ಶಾಸಕ ಬಿಆರ್ ಪಾಟೀಲ್ ಅಭಿಪ್ರಾಯ ಪಟ್ಟಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಜಿಲ್ಲಾ ಮಟ್ಟದ ಯೋಜನಾ ಸಮಿತಿಗಳೊಂದಿಗೆ ಚರ್ಚಿಸಿ ವಿಕೇಂದ್ರಿಕೃತ ಯೋಜನೆಯನ್ನು ರಚಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ. ಜಿಲ್ಲಾ ಯೋಜನಾ ಸಮಿತಿಗಳಿಗೆ ಹೊಸ ಚೈತನ್ಯ ನೀಡಿ ಸಕ್ರಿಯಗೊಳಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

******************

ಸಂಕ್ಷಿಪ್ತ ಸುದ್ದಿಗಳು

- ಪತ್ರಕರ್ತರು ಪ್ರಶ್ನಿಸುವ ಪ್ರವೃತ್ತಿ ಬೆಳೆಸಿಕೊಳ್ಳದಿದ್ದರೆ ಪತ್ರಕರ್ತರಾಗಲು ಸಾಧ್ಯವಿಲ್ಲ ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷೆ ಆಯೇಷಾ ಖಾನಂ ಯುವ ಪತ್ರಕರ್ತರಿಗೆ ಮೈಸೂರಿನಲ್ಲಿಂದು ಸಲಹೆ ನೀಡಿದ್ದಾರೆ.
- ದಿವ್ಯಾಂಗರು ಆತ್ಮವಿಶ್ವಾಸದಿಂದ ಬದುಕಲು ಸರ್ಕಾರ ಎಲ್ಲ ರೀತಿಯ ಅವಕಾಶಗಳನ್ನು ಕಲ್ಪಿಸಿದೆ ಎಂದು ದಾವಣಗೆರೆ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ತಿಳಿಸಿದ್ದಾರೆ.
- ಗದಗ ನಗರದ ವಿ.ಡಿ.ಎಸ್.ಟಿ ಮೈದಾನದಲ್ಲಿ ೨೦೨೫ ರ ಮಾರ್ಚ್ ೧ ರಿಂದ ೩ ರವರೆಗೆ ಫಲಪುಷ್ಪ ಪ್ರದರ್ಶನ ಹಾಗೂ ಜಿಲ್ಲಾ ಮಟ್ಟದ ಸರಸ್ ಮೇಳವನ್ನು ಆಯೋಜಿಸಲಾಗಿದೆ ಎಂದು ಗದಗ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ ಎಸ್ ತಿಳಿಸಿದ್ದಾರೆ.
- ಗದಗ ಜಿಲ್ಲೆಯಲ್ಲಿ ಮಾರ್ಚ್ ೮ ರಂದು ರಾಷ್ಟೀಯ ಲೋಕ ಅದಾಲತ್ ಜರುಗಲಿದ್ದು, ಸಾರ್ವಜನಿಕರು, ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಬೇಕು ಎಂದು ಗದಗ ಜಿಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಸವರಾಜ ತಿಳಿಸಿದ್ದಾರೆ.
- ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಶಾಸಕ ಪ್ರದೀಪ್ ಈಶ್ವರ್ ನಮ್ಮ ಊರಿಗೆ ನಮ್ಮ ಶಾಸಕರು ಕಾರ್ಯಕ್ರಮದಡಿ ನಾಳೆ ಭೇಟಿ ನೀಡಲಿದ್ದಾರೆ.
- ತುಮಕೂರು ಜಿಲ್ಲಾಸ್ಪತ್ರೆಯಲ್ಲಿ ನವಜಾತು ಶಿಶುಗಳ ಚಿಕಿತ್ಸೆ ಸಂಬಂಧಿಸಿದಂತೆ ನಿರ್ಲಕ್ಷ್ಯ ವಹಿಸಿರುವ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಉನ್ನತ ಅಧಿಕಾರಿಗಳ ನಿರ್ಲಕ್ಷದ ಬಗ್ಗೆ ಮಕ್ಕಳ ರಕ್ಷಣಾ ಆಯೋಗ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡು ವಿಚಾರಣೆ ನಡೆಸಲಿದೆ ಎಂದು ಡಾ. ಕೆ.ಟಿ.ತಿಪ್ಪೇಸ್ವಾಮಿ ಹೇಳಿದ್ದಾರೆ.

*********ಮುಕ್ತಾಯ*********